ಅ) ಬೆಂಗಳೂರು ನಗರ ಪಾಲಿಕೆಯ ಕಸ ವಿಲೇವಾರಿ ಗುತ್ತಿಗೆ ಪಡೆಯುವಲ್ಲಿ ವಂಚನೆ ನಡೆದಿರುವುದು ನಿಜವೇ? (ವಿವರ ನೀಡುವುದು):

ಆ) ಈ ವಿಚಾರ ಸರ್ಕಾರದ ಗಮನಕ್ಕೆ ಬಂದದ್ದು ಯಾವಾಗ?

ಇ) ಈ ವಿಚಾರದಲ್ಲಿ ಈವರೆಗೂ ಯಾವ ಕ್ರಮ ಕೈಗೊಳ್ಳಲಾಗಿದೆ? ಎಷ್ಟು ಜನರನ್ನು ಬಂಧಿಸಲಾಗಿದೆ? (ವಿವರವನ್ನು ನೀಡುವುದು):

ಶ್ರೀ ಎಸ್.ಎಂ. ಕೃಷ್ಣ (ಮುಖ್ಯ ಮಂತ್ರಿಗಳು):

ಅ) ಇಲ್ಲ.

ಆ)ಇ) ಉದ್ಭವಿಸುವುದಿಲ್ಲ.

ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಕಾಮಗಾರಿಗೆ ಸಂಬಂಧಪಟ್ಟ ಕಡತಗಳು ನಾಪತ್ತೆಯಾಗಿರುವುದರ ಬಗ್ಗೆ

4381 (5063) : ಶ್ರೀ ಆರ್. ಅಶೋಕ್ (ಉತ್ತರಹಳ್ಳಿ) : ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಕಡತಗಳು ನಾಪತ್ತೆಯಾಗಿರುವುದು ನಿಜವೇ

ಆ) ಯಾವ ಕಾಮಗಾರಿಗೆ ಸಂಬಂಧಪಟ್ಟ ಎಷ್ಟು ಕಡತಗಳು ನಾಪತ್ತೆಯಾಗಿವೆ (ವಿವರ ನೀಡುವುದು):

ಇ) ಕಡತಗಳ ನಾಪತ್ತೆಗೆ ಸಂಬಂಧಪಟ್ಟಂತೆ ಯಾರನ್ನು ಹೊಣೆಗಾರರನ್ನಾಗಿ ಮಾಡಲಾಗಿದೆ, ಅವರ ಮೇಲೆ ಕೈಗೊಂಡಿರುವ ಕ್ರಮಗಳೇನು.

ಈ) ಈ ಕಡತಗಳಲ್ಲಿ ತಿಳಿಸಲಾದ ಕಾಮಗಾರಿಗಳಿಗೆ ಪಾಲಿಕೆ ಒಪ್ಪಿಗೆ ನೀಡಿದೆಯೇ?

ಉ) ನಾಪತ್ತೆಯಾಗಿರುವ ಕಡತಗಳ ಪತ್ತೆಗೆ ಯಾವ ಕ್ರಮ ಕೈಗೊಳ್ಳಲಾಗಿದೆ?

ಶ್ರೀ ಎಸ್.ಎಂ. ಕೃಷ್ಣ (ಮುಖ್ಯ ಮಂತ್ರಿಗಳು):

ಅ) ಪ್ರಸಕ್ತ ಸಾಲಿನಲ್ಲಿ ಯಾವುದೇ ಕಡತ ನಾಪತ್ತೆಯಾಗಿರುವುದು ಕಂಡುಬಂದಿಲ್ಲ.

ಆ) ಇ) ಈ) ಮತ್ತು ಉ) ಉದ್ಭವಿಸುವುದಿಲ್ಲ.

ಬೆಂಗಳೂರು ನೀರು ಸರಬರಾಜು ಮಂಡಳಿಯವರು ನೀರು ದರ ಪರಿಷ್ಕರಣೆ ಮಾಡಿರುವ ವಿವರಗಳನ್ನು ಒದಗಿಸುವ ಬಗ್ಗೆ

4382 (5064) : ಶ್ರೀ ಅಶೋಕ್ ಆರ್. (ಉತ್ತರಹಳ್ಳಿ) : ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಕಳೆದ 3 ವರ್ಷಗಳಲ್ಲಿ ಬೆಂಗಳೂರು ನೀರು ಸರಬರಾಜು ಮಂಡಳಿಯವರು ಎಷ್ಟು ಬಾರಿ ನೀರು ದರ ಪರಿಷ್ಕರಿಸಿರುತ್ತಾರೆ. ವರ್ಷವಾರು ವಿವರ ನೀಡುವುದು: